231

ಹಾಸನ ಡಿಸ್ಟ್ರಿಕ್ಟ್.

ತಾರೀಖು 19ನೇ ಜನವರೀ 1887.

ಇದರಿಂದ ಸಮಸ್ತ ಜನಗಳಿಗೂ ತಿಳಿಯಪಡಿಸುವದೇನಂದರೆ, ಮೈಸೂರು ದಿವಾನಸಾಹೇಬರವರ ಹುಕ್ಕುಂ ಬವೋಜೀಬ್ ಹಾಸನ ಡಿಸ್ಟ್ರಿಕ್ಟು ಪೈಕಿ ಮಂಜೆರಾಬಾದು ತಾಲ್ಲೂಕಿನಲ್ಲಿ ಇರುವ ಮಾರನಹಳ್ಳಿ ಘಾಟಿಯಲ್ಲಿ ಟೋಲ್‌ಗೆಟ್ ಯಂಬ ಸುಂಕದ ಕಟ್ಟೆವಳಗೆ 1887ನೇ ಇಸವಿ ಏಪ್ರೆಲ್ ಮಾಹೆ 1ನೇ ಮಕ್ಕುಂ ಲಾಗಾಯತು 1888ನೇ ಇಸವಿ ಮಾರ್ಚೀ 31ರ ವರಿಗೆ ಸುಂಕ ವಸೂಲ್ ಮಾಡುವ ಸ್ವಾತಂತ್ರ್ಯವು ಸ್ಯ 1887ನೇ ಇಸವಿ ಮಾರ್ಚೀ ತಾರೀಖು 1ರಲ್ಲು ಸಕಲೇಶಪುರದ ಮೊಕ್ತುಂ ತಾಲ್ಲೂಕು ಕಚೇರಿ ವಳಗೆ ಬಹಿರಂಗವಾದ ಹರಾಜು ಮೂಲಕ ವಿಕ್ರಯಿಸಲ್ಪಡುತ್ತೆ.

2. ವಸೂಲಿ ಹಕ್ಕನ್ನು ಕೊಂಡುಕೊಳ್ಳುವ ಕಂಟ್ರಾಕ್ಟುದಾರನು ಇದಕ್ಕೆ ಲಗ್ಗತ್ತಾಗಿರುವ ಷೆಡ್ಯೂಲಿನಲ್ಲಿ ನಮೂದಾಗಿರುವ ದರಗಳ ಮೇರಿಗೇನೆ ಟೋಲ್ ವಸೂಲ್ ಮಾಡಬೇಕು. ಮತ್ತು ಸ್ಯ 1876ನೇ ಇಸವಿ ನವಂಬರ್ 4ನೇ ಮಕ್ಕುಂ 274ನೇ ನಂಬರುವುಳ್ಳ ಲೇಟ್ ಚೀಫ್ ಕಮ್ಮಿಷನರ್ ಸಾಹೇಬರವರ ನೋಟಿಫಿಕೇಷನ್‌ನಲ್ಲಿ ಘಾಯಿಷ್ ಆಗಿರುವ ರೂಲ್ಸ್ ಪ್ರಕಾರ ನಡದುಕೊಳ್ಳಬೇಕು.

3. ಬೆಡ ದರಖಾಸ್ತನ್ನಾಗಲಿ ಯಾವ ದರಖಾಸ್ತನ್ನಾಗಲಿ ಅಂಗೀಕರಿಸುವದಕ್ಕೆ ಯಾ ತಿರಸ್ಕರಿಸುವದಕ್ಕೆ ಹಾಸನ ಡಿಸ್ಟ್ರಿಕ್ಟು ಆಫೀಸರವರು ಅಧಿಕಾರ ವುಳ್ಳವರಾಗಿರುತ್ತಾರೆ.

4. ಯಾವ ದರಖಾಸ್ತು ಅಂಗೀಕರಿಸಲ್ಪಡುತ್ತದೆಯೋ ಅವನು ಕೂಡಲೆ ದರಖಾಸ್ತು ಮೊಬಲಗಿನಲ್ಲಿ ನಾಲ್ಕರಲ್ಲಿ ವಂದಂಶ ಮೊಬಲಗನ್ನ ಅಡ್ವಾನಸಾಗಿ ಠೇವಣಿ ಯಿಟ್ಟು ಬಾಕೀ ಮೊಬಲಗನ್ನು ಸ್ಯ 1887ನೇ ಇಸವಿ ಏಪ್ರೆಲ್ 20ರ ಲಾಗಾಯತು ಸಮನಾದ ಆರು ಖಿಸ್ತುಗಳಾಗಿ ಪ್ರತಿ ತಿಂಗಳ 20ನೇ ತಾರೀಖಿಗೆ ಪಾವತಿ ಮಾಡಬೇಕು, ದರಖಾಸ್ತುದಾರನು ಪ್ರತಿವಾಜೆವಾರಿ ಖಿಸ್ತು ಮೊಬಲಗನ್ನು ತಪ್ಪದೇ ಕೊಡುತ್ತಾ ಬರುವದಕ್ಕೆ ಲಾಯಖಾದ ವಬ್ಬನನ್ನು ಜಾಮೀನು ಕೊಡಬೇಕು.

5. ಠೇವಣಿ ಯಿಡದೇ ಯಿದ್ದರೆ ಅಥವಾ ಜಾಮೀನು ಕೊಡದೇ ಇದ್ದರೆ ದರಕಾಸ್ತುದಾರರಿಗೆ ಲುಕ್ಸಾನುಕರವಾಗಿ ಕಂಟ್ರಾಕ್ಟು ಯರಡನೇ ಹರಾಜು ಮಾಡಲ್ಪಡುವದು. ಖಿಸ್ತು ಪ್ರಕಾರ ಹಣ ಕೊಡುವದಕ್ಕೆ ತಪ್ಪಿದರೆ ಹಾಗೆ ಬಾಕಿಯಾದ ಮೊಬಲಗಿಗೆ ಪಾವತಿ ತಾರೀಖಿನವರಿಗೆ ತಿಂಗಳು 1ಕ್ಕೆ ರೂಪಾಯಿ 1ಕ್ಕೆ ವಂದು ಕಾಣಂತೆ ಬಡ್ಡೀ ವಸೂಲ್ ಮಾಡಲ್ಪಡುವದು, ಮತ್ತು ಡೆಪ್ಯೂಟಿ ಕಮ್ಮಿಷನರವರು ತಮಿಗೆ ಯುಕ್ತ ತೋರುವ ಪ್ರಕಾರ ಅಥವಾ ಜಾಮೀನುದಾರನ ಅಪೇಕ್ಷೆ ಪ್ರಕಾರ ಕಂಟ್ರಾಕ್ಟು ಯರಡನೇ ಹರಾಜು ಮಾಡಲ್ಪಡುವದಕ್ಕೆ ಗುರಿಯಾಗತಕ್ಕದ್ದು ಅದರಿಂದ ಯೀನಾನರೂ ನಷ್ಟ ಸಂಭವಿಸಿದರೆ ಅದು ಕಂಟ್ರಾಕ್ಟುದಾರನಿಂದ ಅಥವಾ ಜಾಮೀನುದಾರನಿಂದ ಕಂದಾಯದ ಬಾಕೀಯಂತೆ ವಸೂಲ್ ಮಾಡಲ್ಪಡತಕ್ಕದ್ದು.

6. ದರಖಾಸ್ತು ಮೊಬಲಗು ಶಿವಾಯಿ 4 ಮತ್ತು 5ನೇ ಕಲಮಿನಲ್ಲಿ ನಮೂದಾಗುವ ಪರತ್ತಿಗೆ ವಳಪಟ್ಟು ಖಜಾನೆಗೆ ಸಲಾಯಿಸುವ ಸದರೀ ಕಂಟ್ರಾಕ್ಟು ಮೊಬಲಗಿನ ರೂಪಾಯಿ 1ಕ್ಕೆ 0—1—0 ಯಂತೆ ಲೋಕಲ್‌ಸೆಸ್ ಕೊಡಲಿಕ್ಕೆ ಕಂಟ್ರಾಕ್ಟುದಾರನು ಬದ್ಧನಾಗಿರುತ್ತಾನೆ.

7. ಪ್ರತಿ ದಿನದ ಟೋಲ್ ವಸೂಲ್ ತೋರಿಸುವ ನಿಜವಾದ ಮತ್ತು ಕರಾರುವಾಕಾ ಲೆಕ್ಕವನ್ನ ಯಿಜಾರು ಸಹ ಕಂಟ್ರಾಕ್ಟುದಾರನು ಬದ್ಧನಾಗಿ ಯಿರುವದಲ್ಲದೆ ಡಿಸ್ಟ್ರಿಕ್ಟು ಮತ್ತು ತಾಲ್ಲೂಕು ವುದ್ಯೋಗಸ್ಥರ ಇನ್‌ಸ್ಪೆಕ್ಷನ್‌ಗೆ ಲೆಕ್ಕ ವಳಗಾಗಿ ಯಿರತಕ್ಕದ್ದು.

8. ಗವರ್ನಮೆಂಟ್ ಟೋಲ್ ಮನೆ ಮತ್ತು ಗೇಟನ್ನು ಕಂಟ್ರಾಕ್ಟುದಾರ ಸ್ವೀಕರಿಸಿ ಉಪಯೋಗಿಸತಕ್ಕದ್ದು. ಮತ್ತು ಅವುಗಳನ್ನ ಅತನು ಪೂರಾ ದುರಸ್ತಿನಲ್ಲಿ ಯಿಟ್ಟುಕೊಂಡಿರತಕ್ಕದ್ದು.

9. ಕಂಟ್ರಾಕ್ಟುದಾರನು ಪ್ರತಿ ತಿಂಗಳ ಗುರ್ರೇ ತಾರೀಖಿನಲ್ಲಿ ಹಿಂದಣ ತಿಂಗಳ ಟೋಲ್ ವಸೂಲ್ ಲೆಕ್ಕವನ್ನ ಮಂಜೆರಾಬಾದು ತಾಲ್ಲೂಕು ಕಚೇರಿಗೆ ಕಳುಹಿಸತಕ್ಕದ್ದು.

ದರಗಳಪಟ್ಟಿ—1882ನೇ ಇಸವಿ ಮಾರ್ಚೀ 18ನೇ ಮಕ್ಕುಂ ಮೈಸೂರು ಗೆಜೆಟ್ಟಿನಲ್ಲಿ ನಮೂದಾಗಿರುತ್ತೆ.

ಟಿ. ಆನಂದರಾವ್,
ಡೆಪ್ಯೂಟಿ ಕಮ್ಮಿಷನರ್.